ಆ) ಕಿದ್ವಾಯಿ ಸಂಸ್ಥೆಯು ಐಸೋಟೋಪ್ ಖರೀದಿಸಲು ಕ್ರಮ ವಹಿಸಿದೆ.

ಇ) ಮತ್ತು ಈ) ಎಕ್ಸರೇ ಸೌಲಭ್ಯ ಇರುತ್ತದೆ. ಜನರೇಟರ್ ಪಡೆಯಲು ಧನ ಸಹಾಯಕ್ಕಾಗಿ ಪ್ರಯತ್ನಿಸಲಾಗುತ್ತಿದೆ. ತಜ್ಞ ವೈದ್ಯರುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ.

5801 (6581) ಶ್ರೀ ಶ್ರೀನಿವಾಸ ಎಂ.(ಮಂಡ್ಯ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ತಾಲ್ಲೂಕಿನ ಬೇಲೂರು ಹಾಗೂ ಕನ್ನಲಿ ಗ್ರಾಮಗಳಲ್ಲಿನ ಸರ್ಕಾರಿ ಪ್ರೌಢಶಾಲೆಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಶಾಲೆಗಳು ಎಷ್ಟು ವರ್ಷದಿಂದ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ;

ಇ) ಈ ಶಾಲೆಗಳಿಗೆ ಸ್ವಂತ ಕಟ್ಟಡ ಹೊಂದಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

ಈ) ಇದಕ್ಕೆ ಕಾಲಮಿತಿಯನ್ನು ಗೊತ್ತುಪಡಿಸಿದೆಯೇ; (ಪೂರ್ಣ ವಿವರ ಒದಗಿಸುವುದು)?

ಶ್ರೀ ಆರ್. ರಾಮಲಿಂಗಾರೆಡ್ಡಿ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಮಂಡ್ಯ ತಾಲ್ಲೂಕಿನ ಬೇಲೂರು ಹಾಗೂ ಕನ್ನಲಿ ಗ್ರಾಮಗಳಲ್ಲಿನ ಸರ್ಕಾರಿ ಪ್ರೌಢಶಾಲೆಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವುದಿಲ್ಲ. ಈ ಎರಡೂ ಪ್ರೌಢಶಾಲೆಗಳು ಆಯಾ ಗ್ರಾಮಗಳ ಸರ್ಕಾರಿ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ನಡೆಯುತ್ತಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಸರ್ಕಾರಿ ಪ್ರೌಢಶಾಲೆ ಬೇಲೂರಿಗೆ ಆರ್.ಐ.ಡಿ.ಎಫ್. 10ರಡಿ ಮೂರು ಕೊಠಡಿಗಳನ್ನು ಮಂಜೂರು ಮಾಡಿದೆ. ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ಪ್ರೌಢಶಾಲೆ ಕನ್ನಲಿಗೂ ಸ್ವಂತ ಕಟ್ಟಡ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಈ) ನಬಾರ್ಡ್‌ನ ಆರ್ಥಿಕ ನೆರವಿನೊಂದಿಗೆ ಆರ್.ಐ.ಡಿ.ಎಫ್. 10ರಡಿ ಮಂಜೂರಾಗಿರುವ ಕೊಠಡಿಗಳನ್ನು 2005–06ನೇ ಸಾಲಿನಲ್ಲಿಯೇ ಪೂರ್ಣಗೊಳಿಸುವಂತೆ ತಿಳಿಸಿದ್ದು, 8 ತಿಂಗಳ ಕಾಲಾವಕಾಶವನ್ನು ಸರ್ಕಾರಿ ಆದೇಶದಲ್ಲಿಯೇ ನಿಗದಿಪಡಿಸಲಾಗಿದೆ.

5802 (6512) ಶ್ರೀ ಸುನೀಲ್ ಕುಮಾರ್ ವಿ.(ಕಾರ್ಕಳ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾರ್ಕಳ ತಾಲ್ಲೂಕಿನಲ್ಲಿ ಎಷ್ಟು ಕಿರಿಯ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳಿವೆ;

ಆ) ಎಲ್ಲಾ ಸರ್ಕಾರಿ ಕಿರಿಯ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಮಂಜೂರಾಗಿರುವ ಭರ್ತಿಯಾದ ಹಾಗೂ ಖಾಲಿ ಇರುವ ಶಿಕ್ಷಕರ ಹುದ್ದೆಗಳ ವಿವರಗಳನ್ನು ನೀಡುವುದು;

ಇ) ಈ ಎಲ್ಲಾ ವಿವರಗಳನ್ನು ನೀಡುವಂತೆ ಕಾರ್ಕಳ ಕ್ಷೇತ್ರ ಶಿಕ್ಷಣಾಧಿಕಾರಿಯವರನ್ನು ಕೋರಲಾಗಿದ್ದು, ಈ ತನಕ ವಿವರ ಬಂದಿರುವುದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದರೆ, ಕ್ಷೇತ್ರ ಶಿಕ್ಷಣಾಧಿಕಾರಿಯವರು ಕ್ಷೇತ್ರದ ಶಾಸಕರಿಗೆ ವಿವರ ನೀಡಬಾರದು ಎಂಬ ನಿಯಮವಿದೆಯೇ;

ಉ) ಕ್ಷೇತ್ರ ಶಿಕ್ಷಣಾಧಿಕಾರಿಯವರ ಈ ರೀತಿಯ ನಿರಾಸಕ್ತಿಗೆ ಯಾವ ಕ್ರಮ ಕೈಗೊಳ್ಳಲಾಗುವುದು;

ಊ) ಶಾಸಕರಿಗೆ ವಿವರಗಳನ್ನು ನೀಡುವ ಬಗ್ಗೆ ಸರ್ಕಾರದಿಂದ ಸೂಕ್ತ ಸುತ್ತೋಲೆ, ನೀಡಲಾಗುವುದೇ; ವಿವರ ನೀಡುವುದು;

ಶ್ರೀ ಆರ್. ರಾಮಲಿಂಗಾರೆಡ್ಡಿ. (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕಾರ್ಕಳ ತಾಲ್ಲೂಕಿನಲ್ಲಿ ಒಟ್ಟು, 85 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಹಾಗೂ 92 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿವೆ.

ಆ) ಒಟ್ಟು ಎಲ್ಲಾ ಸರ್ಕಾರಿ ಹಿರಿಯ ಹಾಗೂ ಕಿರಿಯ ಪ್ರಾಥಮಿಕ. ಶಾಲೆಗಳಲ್ಲಿ ಮಂಜೂರಾಗಿರುವ ಹುದ್ದೆಗಳು – 656

ಭರ್ತಿಯಾದ ಹುದ್ದೆಗಳು 584

ಖಾಲಿ ಇರುವ ಹುದ್ದೆಗಳು 72

ಇ) ಹೌದು.

ಈ) ಶಾಸಕರುಗಳಿಂದ ಬಂದ ಪತ್ರಗಳಿಗೆ ಕೂಡಲೇ ಸ್ವೀಕೃತಿ ನೀಡಿ, ತಕ್ಷಣ ಉತ್ತರ ನೀಡಬೇಕೆಂದು ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ದಿನಾಂಕ 20031998 ಹಾಗೂ 1032000 ಸರ್ಕಾರದ ಸುತ್ತೋಲೆಗಳಲ್ಲಿ ಸೂಚಿಸಲಾಗಿರುತ್ತದೆ. ಈ ಕ್ರಮವನ್ನು ಕಡ್ಡಾಯವಾಗಿ ಪಾಲಿಸುವಂತೆ ನಿರ್ದೇಶಿಸಲಾಗಿರುತ್ತದೆ.

ಅಲ್ಲದೇ ಕೂಡಲೇ ದೊರೆಯುವ ಮತ್ತು ರಹಸ್ಯವಲ್ಲದ ಸ್ಥಳೀಯ ಮಹತ್ವದ ವಿಷಯಗಳಿಗೆ ಮಾಹಿತಿ ಮತ್ತು ಅಂಕಿಅಂಶಗಳನ್ನು ಕೋರಿದಾಗ ವಿವರಗಳನ್ನು ಒದಗಿಸಬೇಕಲ್ಲದೆ, ಸಂದೇಹಾಸ್ಪದ ಸಂದರ್ಭಗಳಲ್ಲಿ ಕೋರಿಕೆಯನ್ನು ತಿರಸ್ಕರಿಸುವ ಮೊದಲು ಉನ್ನತ ಅಧಿಕಾರಿಗಳಿಂದ ನಿರ್ದೇಶನ ಪಡೆಯುವಂತೆ ಕೂಡಾ ಸೂಚಿಸಲಾಗಿರುತ್ತದೆ.

ಉ) ಕ್ಷೇತ್ರ ಶಿಕ್ಷಣಾಧಿಕಾರಿಯು ಮೇಲಿನ ಸರ್ಕಾರದ ಸುತ್ತೋಲೆಗಳಲ್ಲಿನ ಸೂಚನೆಗಳನ್ನು ಪಾಲಿಸಿಲ್ಲವೆಂಬುದರ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ಸೂಕ್ತಕ್ರಮವನ್ನು ಜರುಗಿಸಲಾಗುವುದು.

ಊ) ಈ ಕುರಿತಂತೆ ಈಗಾಗಲೇ ದಿನಾಂಕ:20.03.1998 ಮತ್ತು 1.3.2000 ಸರ್ಕಾರದ ಸುತ್ತೋಲೆಗಳು ಜಾರಿಯಲ್ಲಿರುತ್ತವೆ.

5803 (6485) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲಾ ಕೇಂದ್ರವಾಗಿ ಮಾರ್ಪಾಟು ಆಗಿರುವುದರಿಂದ ಒಂದು ಉಪನಗರ ನಿರ್ಮಾಣಕ್ಕೆ ಸರ್ಕಾರ ಕ್ರಮ ಕೈಗೊಂಡಿದೆಯೇ;

ಆ) ಉಪನಗರ ನಿರ್ಮಾಣಕ್ಕೆ ಸರ್ಕಾರಕ್ಕೆ ಬೇಕಾಗಿರುವ ಸವಲತ್ತುಗಳೇನು;

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :